(06)

156ನೆ.6 ನಿ:72 Sl.No:- 13 + 89

ದಿ: 13/08/2025

# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಮಂಜುನಾಥ ಭಂಡಾರಿ ಇವರುಗಳು ನಿಯಮ-72 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

***

**ವಿಷಯ:** ತ್ರಿಸ್ತರ ಪಂಚಾಯತಿಗಳು ಪಂಚಾಯತ್ ರಾಜ್ ವ್ಯವಸ್ಥೆಯ ಬುನಾದಿಯಾಗಿದ್ದು, ಗ್ರಾಮೀಣಾಭಿವೃದ್ಧಿಯಲ್ಲಿ ತಮ್ಮದೇ ಕೊಡುಗೆ ನೀಡುತ್ತಿವೆ. ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕಾರ 26 ಉಪಬಂಧಗಳನ್ವಯ ವಿವಿದ ಇಲಾಖೆಗಳ ಅಭಿವೃದ್ಧಿ ಕಾರ್ಯಕ್ರಮ ಅನುಷ್ಠಾನದ ನಿಯಂತ್ರಣ ಮತ್ತು ಮೇಲ್ವಿಚಾರಣೆಯನ್ನು ಅನುಸೂಚಿ 1, 2 ಹಾಗೂ 3 ರ ಮೂಲಕ ಅಧಿಸೂಚಿಸಲಾಗಿದೆ. ಈ ಪ್ರಕಾರ 28 ಇಲಾಖೆಗಳಲ್ಲಿ 3 ಇಲಾಖೆಗಳ ಜವಾಬ್ದಾರಿ ನಕ್ಷೆಯನ್ನು ಈಗಾಗಲೇ ಆದೇಶದ ಮೂಲಕ ಜಾರಿಗೆ ತರಲಾಗಿದೆ.

ಆದರೆ ಜವಾಬ್ದಾರಿ ನಕ್ಷೆಯಂತೆ ಜವಾಬ್ದಾರಿ ನಿಭಾಯಿಸಬೇಕಾದ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತಿಗಳಲ್ಲಿ ಚುನಾಯಿತ ಜನಪ್ರತಿನಿಧಿಗಳಿಲ್ಲದಿರುವುದು ವಿಪರ್ಯಾಸವೇ ಸರಿ. ಸಂವಿಧಾನವು ಸ್ಥಳೀಯ ಸರ್ಕಾರಗಳಿಗೆ ಅಗತ್ಯ ಸಂಪನ್ಮೂಲ ಹಾಗೂ ಅಧಿಕಾರಗಳನ್ನು ಸಂಬಂಧಿಸಿದ ರಾಜ್ಯಗಳು ವರ್ಗಾಯಿಸಬೇಕೆಂದಿದೆ. ಆದ್ದರಿಂದ ಸ್ಥಳೀಯ ಸಂಸ್ಥೆಗಳನ್ನು ಬಲಪಡಿಸಲು ಆಡಳಿತಾತ್ಮಕ ಮತ್ತು ತಾಂತ್ರಿಕ ತೊಂದರೆಗಳನ್ನು ಕೂಡಲೇ ನಿವಾರಿಸಿ ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಶೀಘ್ರ ಚುನಾವಣೆ ನಡೆಸುವ ಬಗ್ಗೆ.

******

**ಉತ್ತರ:** ಅಧಿಕಾರ ವಿಕೇಂದ್ರಿಕರಣ ತತ್ವದಡಿ 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅಧಿಕಾರ ವಿಕೇಂದ್ರಿಕರಣಗೊಳಿಸುವ ಉದ್ದೇಶದಿಂದ ಸಂವಿಧಾನದ 73 ನೇ ತಿದ್ದುಪಡಿ ಅನುಸಾರ ರಾಜ್ಯದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಅನ್ನು ದಿನಾಂಕ: 10-05-1993 ರಿಂದ ಜಾರಿಗೊಳಿಸಲಾಗಿರುತ್ತದೆ. ಈಅಧಿನಿಯಮದನ್ವಯ ರಚಿಸಲಾಗಿರುವ ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಮತ್ತು ಜಿಲ್ಲಾ ಪಂಚಾಯತಿಗಳು ಸ್ಥಳೀಯ ಸ್ವಯಂ ಆಡಳಿತ ಸಂಸ್ಥೆಗಳಾಗಿ ಕಾರ್ಯನಿರ್ವಹಿಸಬೇಕೆಂಬುದು ಅಧಿನಿಯಮದ ಆಶಯವಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 240 ರ ಉಪಬಂಧನ್ವಯ ರಾಜ್ಯ ಸರ್ಕಾರ ವಿವಿಧ ಅಭಿವೃದ್ಧಿ ಇಲಾಖೆಗಳ ಕಾರ್ಯಕ್ರಮಗಳ ಅನುಷ್ಠಾನದ ನಿಯಂತ್ರಣ ಹಾಗೂ ಮೇಲ್ವಿಚಾರಣೆಯನ್ನು ಸರ್ಕಾರ ಈಗಾಗಲೇ ಅಧಿನಿಯಮದ ಅನುಸೂಚಿ-I, ಅನುಸೂಚಿ-II ಮತ್ತು ಅನುಸೂಚಿ-III ರಲ್ಲಿ ಅಧಿಸೂಚಿಸಿದೆ.

ಅಭಿವೃದ್ಧಿ ಯೋಜನೆಗಳನ್ನು ಮತ್ತು ಆಯವ್ಯಯ ದಸ್ತಾವೇಜಿನೊಂದಿಗೆ ಹಾಜರುಪಡಿಸಬೇಕಾದ ವಾರ್ಷಿಕ ಹಣಕಾಸು ಪುನರಾವಲೋಕನೆಯನ್ನು ರೂಪಿಸುವುದಕ್ಕೆ ಸರ್ಕಾರವನ್ನು ಸಮರ್ಥಗೊಳಿಸುವುದಕ್ಕೆ ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯನ್ನು ರಚಿಸಲಾಗಿದೆ.

ಮಾನ್ಯ ಮುಖ್ಯಮಂತ್ರಿಗಳು 2023-24ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ-1993ರ ಪ್ರಕರಣ 2(28-ಸಿ) ರಡಿ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳು ಹೊಂದಿರಬಹುದಾದ ಜವಾಬ್ದಾರಿಗಳ ವಿವರವಾದ ಪಟ್ಟಿಯೊಂದಿಗೆ ಜವಾಬ್ದಾರಿ ನಕ್ಷೆ ಸಿದ್ಧಪಡಿಸಲು ಕ್ರಮ ವಹಿಸಲಾಗಿದೆ.

ಪ್ರಸ್ತುತ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ಕೃಷಿ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾಂತರ ಕಲ್ಯಾಣ, ಹಜ್ ಮತ್ತು ವಕ್ಫ್, ರೇಷ್ಮೆ, ಜಲಾನಯನ, ಮೀನುಗಾರಿಕೆ ಇಲಾಖೆಗಳಿಗೆ ಸಂಬಂಧಿಸಿದಂತೆ ಜವಾಬ್ದಾರಿ ನಕ್ಷೆಯನ್ನು ಸಿದ್ಧಪಡಿಸಿ ಅಧಿಸೂಚಿಸಲಾಗಿರುತ್ತದೆ. ಇನ್ನುಳಿದ ಇಲಾಖೆಗಳಿಗೆ ಜವಾಬ್ದಾರಿ ನಕ್ಷೆಯನ್ನು ಸಿದ್ಧಪಡಿಸಲು ಕ್ರಮ ವಹಿಸಲಾಗುತ್ತಿದೆ.

ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಅವಧಿಯು ಜೂನ್ 2021ಕ್ಕೆ ಮುಕ್ತಾಯಗೊಂಡಿರುತ್ತದೆ. ಅವಧಿಯು ಮುಗಿದ ನಂತರ ಚುನಾವಣೆಯನ್ನು ನಡೆಸುವ ಸಿದ್ಧತೆಯಲ್ಲಿದ್ದಾಗ ರಾಜ್ಯದಲ್ಲಿ ಕೋವಿಡ್ ಸಾಂಕ್ರಾಮಿಕ ರೋಗ ಹಿನ್ನಲೆಯಲ್ಲಿ ಚುನಾವಣೆ ನಡೆಸಲು ಸಾಧ್ಯವಾಗಲಿಲ್ಲ. ತದನಂತರ, ರಾಜ್ಯ ಸರ್ಕಾರ ಹೊಸದಾಗಿ ಜಿಲ್ಲಾ ಹಾಗೂ ತಾಲ್ಲೂಕುಗಳನ್ನು ರಚಿಸಲಾಗಿದ್ದು, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿ ಕ್ಷೇತ್ರಗಳ ಭೂ ವ್ಯಾಪ್ತಿಯಲ್ಲಿ ಬದಲಾವಣೆಯಾದ ಕಾರಣ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತಿಗಳ ಚುನಾವಣಾ ಕ್ಷೇತ್ರಗಳನ್ನು ಪುನರ್ ರಚಿಸಬೇಕಾದ ಅನಿವಾರ್ಯತೆ ಉಂಟಾಗಿದೆ.

ತದನಂತರ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ಕ್ಕೆ ತಿದ್ದುಪಡಿ ತರಲಾಗಿದೆ.

1. ಸರ್ಕಾರವು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ 2021, ದಿನಾಂಕ:18-9-2021ರ ಪ್ರಕರಣ 124, 163 ರಡಿಯಲ್ಲಿ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ ನಿರ್ಣಯ ಹಾಗೂ ಪ್ರಕರಣ 123, 162 ರಡಿಯಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳ ಮೀಸಲಾತಿಯನ್ನು ನಿಗದಿಪಡಿಸುವ ಅಧಿಕಾರವನ್ನು ಹೊಂದಿರುತ್ತದೆ.

2. ಈ ತಿದ್ದುಪಡಿಯ ಪ್ರಕಾರ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ :ಗ್ರಾಅಪಂರಾ 319 ಜಿಪಸ 2021, ದಿನಾಂಕ: 13-10-2021 ರಂದು ರಚಿಸಲಾಗಿದೆ.
3. ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದ ಶಿಫಾರಸ್ಸಿನಂತೆ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ನಿರ್ಣಯಿಸಿ ಸರ್ಕಾರವು ದಿನಾಂಕ:01-03-2023 ರಂದು ಅಧಿಸೂಚನೆ ಹೊರಡಿಸಿತ್ತು.
4. ನಂತರ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿಸಂಖ್ಯೆ: 20426/2021ರ ಪ್ರಕರಣದಲ್ಲಿ ದಿನಾಂಕ:28-06-2023ರಂದು ನೀಡಿದ ಆದೇಶದಂತೆ ರಾಜ್ಯದ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ರೀಡೂ (Redo) ಮಾಡಲು ಸರ್ಕಾರವು ತೀರ್ಮಾನಿಸಿತು.
5. ನಂತರ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ಹೊಸದಾಗಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪಂ 319 ಜಿಪಸ 2021 ದಿನಾಂಕ: 10-07-2023 ರಂದು ರಚಿಸಲಾಗಿದೆ.
6. ಆಯೋಗದ ಶಿಫಾರಸ್ಸಿನಂತೆ ಸರ್ಕಾರವು, ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ಶಿವಮೊಗ್ಗ ಜಿಲ್ಲೆ ಹೊರತುಪಡಿಸಿ ಅಧಿಸೂಚನೆ ಹೊರಡಿಸಿದೆ.
7. ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 26 ಶಾಸನ 2023, ದಿನಾಂಕ:30-01-2024 ರಂದು ಶಿವಮೊಗ್ಗ ಜಿಲ್ಲೆಯ ಮಲೆನಾಡು ಭಾಗದ ತಾಲ್ಲೂಕುಗಳ ಜಿಲ್ಲಾ ಪಂಚಾಯತಿ ಸದಸ್ಯರ ಸಂಖ್ಯೆ ನಿಗಧಿಪಡಿಸುವ ಸಂಬಂಧ ಅಧಿನಿಯಮಕ್ಕೆ ತಿದ್ದುಪಡಿ ತರಲಾಗಿದೆ.
8. ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 03 ಶಾಸನ 2024, ದಿನಾಂಕ:11-03-2024 ರಂದು ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತಿ ಸದಸ್ಯರ ಸಂಖ್ಯೆ ನಿಗಧಿಪಡಿಸುವ ಸಂಬಂಧ ಅಧಿನಿಯಮಕ್ಕೆ ತಿದ್ದುಪಡಿ ತರಲಾಗಿದೆ.
9. ನಂತರ ಶಿವಮೊಗ್ಗ ಮತ್ತು ಕೊಡಗು ಜಿಲ್ಲೆಯ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಯ ಸೀಮಾ ಗಡಿಯನ್ನು ಗುರುತಿಸಿ ಅಧಿಸೂಚಿಸಲಾಗಿದೆ.

ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳಿಗೆ ಮೀಸಲಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ ಚುನಾವಣೆ ನಡೆಸಲಾಗುವುದು.

ಮುಂದುವರೆದು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 212 ಜಿಪಸ 2021, ದಿನಾಂಕ:26.04.2021ರಲ್ಲಿ ಆಡಳಿತ ಅಧಿಕಾರಿಯನ್ನು ನೇಮಿಸಲಾಗಿದ್ದು, ಕರ್ನಾಟಕ ಗ್ರಾಮ

ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 239ರಲ್ಲಿನ ಉಪಬಂಧಧದನ್ವಯ ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳ ಆಡಳಿತಾಧಿಕಾರಿಗಳು ಎಲ್ಲಾ ಪ್ರಕಾರ್ಯಗಳು ಮತ್ತು ಜವಾಬ್ದಾರಿಗಳನ್ನು ನಿರ್ವಹಿಸಲು ಅಧಿಕಾರ ಹೊಂದಿರುತ್ತಾರೆ. ಆಡಳಿತಾಧಿಕಾರಿಗಳು ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳಲ್ಲಿ ಕ್ರಿಯಾ ಯೋಜನೆಯನ್ನು ತಯಾರಿಸಿಕೊಂಡು ಯೋಜನೆ/ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಶೀಘ್ರವಾಗಿ ಮೀಸಲಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಚುನಾವಣಾ ಆಯೋಗಕ್ಕೆ ಕಳುಹಿಸಲಾಗುವುದು.

ಸಂಖ್ಯೆ:RDPR 566 GPA 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು